ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ; ನ್ಯಾಯಾಲಯ,
ಶ್ರೀರಂಗಪಟ್ಟಣ. PW-1

ಸಾಕ್ಷಿಗೆ ಪ್ರಮಾಣ ವಚನ ಮಾಡಲಾದ ದಿನಾಂಕ 17.04.2025

ಮುಂದುವರೆದ ಪಾಟೀ ಸವಾಲುಃ 6 ಮತ್ತು 7 ನೇ ಪ್ರತಿವಾದಿ ಪರ ವಕೀಲರಿಂದಃ

ಬಸವೇಗೌಡರು ಮತ್ತು ಮೂಡೇಗೌಡರಿಗೆ ದಾವಾ ಸ್ವತ್ತು ಹೇಗೆ ಬಂದಿರುತ್ತದೆ ಎನ್ನುವ ಪ್ರಶ್ನೆಗೆ ಸಾಕ್ಷಿಯು ಬಸವೇಗೌಡರು ಮತ್ತು ಮೂಡೇಗೌಡರು ದಾವಾ ಸ್ವತ್ತನ್ನು ರೂ.10,000/- ಗಳಿಗೆ ಚೌಡಯ್ಯರವರ ಕಡೆಯಿಂದ ಖರೀದಿ ಮಾಡಿರುತ್ತಾರೆ ಎಂದು ನುಡಿಯುತ್ತಾರೆ.

ಸದರಿ ಬಸವೇಗೌಡರು ಮತ್ತು ಮೂಡೇಗೌಡರು ಸರ್ವೆ ನಂ10/1 ರಲ್ಲಿ 32 ಗುಂಟೆ, ಸರ್ವೆ ನಂ.10/2 ರಲ್ಲಿ 31 ಗುಂಟೆ , ಸರ್ವೆ ನಂ.10/3 ರಲ್ಲಿ 26 ಗುಂಟೆ , ಸರ್ವೆ ನಂ.13/1 ಎ ರಲ್ಲಿ 5 ಗುಂಟೆ, ಸರ್ವೆ ನಂ.13/1 ಬಿ ರಲ್ಲಿ 1 ಎಕರೆ 3 ಗುಂಟೆ ಜಮೀನನ್ನು ಖರೀದಿ ಮಾಡಿರುತ್ತಾರೆ. ಈ ವಿಚಾರದಲ್ಲಿ ನೀವು ವಾದ ಪತ್ರದಲ್ಲಿ ಬರೆಸಿರುತ್ತೀರಾ ಎನ್ನುವ ಪ್ರಶ್ನೆಗೆ ಸಾಕ್ಷಿಯು ಹೌದು ಎಂದು ನುಡಿಯುತ್ತಾರೆ.

6 ಗುಂಟೆ ನಾಲಾಗೆ ರಿಸರ್ವ್ ಆಗಿರುವ ಬಗ್ಗೆನೀವೇನಾದರೂ ನ್ಯಾಯಾಲಯಕ್ಕೆ ದಾಖಲೆಗಳನ್ನು ಹಾಜರು ಪಡಿಸಿರುತ್ತೀರಾ ಎನ್ನುವ ಪ್ರಶ್ನೆಗೆ ಸಾಕ್ಷಿಯು ಅದರ ಬಗ್ಗೆ ಕ್ರಯ ಪತ್ರದಲಿ ಬರೆದಿರುತ್ತದೆ ಎಂದು ನುಡಿಯುತ್ತಾರೆ.

(ಈ ಹಂತದಲ್ಲಿ ಮಾನ್ಯ ಪ್ರತಿವಾದಿ ಪರ ವಕೀಲರು ಮುಂದುವರೆದ ಪಾಟೀ ಸವಾಲಿಗಾಗಿ ಕಾಲಾವಕಾಶ ಕೋರಿದ್ದು ಆಲಿಸಿ ಮುಂದೂಡಲಾಯಿತು)

ನನ್ನ ಉಕ್ತಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.

ಸಾ.ಓ.ಹೇ.ಸ.ಒ

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆಎಂಎಫ್‌ಸಿ., ಶ್ರೀರಂಗಪಟ್ಟಣ.